ತುಂಗಭದ್ರ ಅಣೆಕಟ್ಟಿನಡಿಯಲ್ಲಿ ಬ್ಯಾಲೆನ್ಸಿಂಗ್ ರಿಸರ್ವಾಯರ್ ನಿರ್ಮಾಣ

255(325)ಶ್ರೀ ಅಲ್ಲಂ ವೀರಭದ್ರಪ್ಪ (ಕುರುಗೋಡು) : ಮಾನ್ಯ ಬೃಹತ್ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ)ತುಂಗಭದ್ರಾ ಅಣೆಕಟ್ಟಿನಡಿಯಲ್ಲಿ ಬ್ಯಾಲೆನ್ಸಿಂಗ್ ರಿಸರ್ವಾಯರ್ ನಿರ್ಮಿಸಲು ಸಮೀಕ್ಷೆ ನಡೆಸಲು ರೈಟ್ಸ್ ಕಂಪನಿಗೆ ಗುತ್ತಿಗೆ ನೀಡಲಾಗಿದೆಯೇ;

ಆ)ಹಾಗಿದ್ದಲ್ಲಿ ಇದಕ್ಕಾಗಿ ರೈಟ್ಸ್ ಕಂಪನಿಗೆ ನೀಡಬೇಕಾದ ಹಣವೆಷ್ಟು;

ಇ) 1998-99ರ ಆಯವ್ಯದಲ್ಲಿ ಇದಕ್ಕಾಗಿ ಹಣ ಬಿಡುಗಡೆ ಮಾಡಲಾಗಿದೆಯೇ;

ಈ)ಈ ಬ್ಯಾಲೆನ್ಸಿಂಗ್ ರಿಸರ್ವಾಯರ್‌ಗಳಿಗೆ 1999-2000ರ ಆಯವ್ಯಯದಲ್ಲಿ ಹಣ ಒದಗಿಸಲಾಗುವುದೇ ?

ಕೆ.ಎನ್.ನಾಗೇಗೌಡ (ಬೃಹತ್ ನೀರಾವರಿ ಸಚಿವರು) :

ಅ)ರೈಟ್ಸ್ ಕಂಪನಿಗೆ ಗುತ್ತಿಗೆ ನೀಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಆ)ಮತ್ತು ಇ)ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಈ)ಪರಿಶೀಲಿಸಲಾಗುವುದು.

ಹುಬ್ಬಳ್ಳಿ ನಗರದಲ್ಲಿ ಪಡಿತರ ಅಂಗಡಿಗಳಿಗೆ ಆಹಾರ ಇಲಾಖೆಯಿಂದ ಆಗುತ್ತಿರುವ ಕಿರುಕುಳ

258 (707)ಶ್ರೀಆಶೋಕ ಶಂಕರ ಕಾಟ್ವೆ (ಹುಬ್ಬಳ್ಳಿ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ)ಹುಬ್ಬಳ್ಳಿ ನಗರದಲ್ಲಿ ಆಹಾರ ನಿರೀಕ್ಷಕರು ಪಡಿತರ ಅಂಗಡಿಗಳಿಗೆ ಭೇಟಿ ನೀಡಿ ವಿನಾಕಾರಣ ಕಿರುಕುಳ ನೀಡಿ ಅಮಾನತ್ತುಗೊಳಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ)ಹಾಗಿದ್ದಲ್ಲಿ ಈ ರೀತಿ ಅಮಾನತ್ತು ಗೊಳಿಸಲಾದ ಅಂಗಡಿಗಳ ಸಂಖ್ಯೆ ಎಷ್ಟು?

ಇ)ಈ ರೀತಿ ವಿನಾಕಾರಣ ಕಿರುಕುಳ ನೀಡುವುದನ್ನು ತಡೆಗಟ್ಟಲು ಸರ್ಕಾರವು ತೆಗೆದುಕೊಳ್ಳಲಿರುವ ಕ್ರಮಗಳು ಯಾವುವು?

ಶ್ರೀ ಜಿ. ಬಸವಣ್ಣಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ)ಇಲ್ಲ. ದೈನಂದಿನ ಕೆಲಸ ಕಾರ್ಯಗಳ, ಪ್ರಕಾರ ಆಹಾರ ನಿರೀಕ್ಷಕರು ನ್ಯಾಯಬೆಲೆ ಅಂಗಡಿಗಳನ್ನು ತಪಾಸಣೆ ಮಾಡುತ್ತಲಿದ್ದು ಅಂಗಡಿಯಲ್ಲಿ ನ್ಯೂನತೆ ಕಂಡುಬಂದಲ್ಲಿ ಕಾನೂನಿನಂತೆ ಕ್ರಮ ಕೈಗೊಳ್ಳುತ್ತಾರೆ

ಆ)ನ್ಯೂನತೆಗಳು ಕಂಡುಬಂದ 4 ನ್ಯಾಯಬೆಲೆ ಅಂಗಡಿಗಳನ್ನು ಅಮಾನತ್ತು ಗೊಳಿಸಲಾಗಿದೆ.

ಇ)ಕಿರುಕುಳ ನೀಡಿದ್ದು ಸರ್ಕಾರದ ಗಮನಕ್ಕೆ ಬಂದಿಲ್ಲ ಬಂದರೆ ಯೋಗ್ಯ ಕ್ರಮ ತೆಗೆದು ಕೊಳ್ಳಲಾಗುವುದು.